# ಮುಖ್ಯ ನ್ಯಾಯಿಕ ದಂಡಾಧಿಕಾರಿಗಳವರ ನ್ಯಾಯಾಲಯ, ಯಾದಗಿರಿ

## ಸಿ.ಸಿ. ನಂ. 1487 / 2024

ಸಿಡಬ್ಲ್ಯೂ- **02**
ಪಿಡಬ್ಲ್ಯೂ-**02**

ದಿನಾಂಕಃ **03.04.2025.**

ಸಾಕ್ಷಿಗೆ ಸತ್ಯ ಪ್ರತಿಜ್ಞೆ ಬೋಧಿಸಲಾಯಿತು

| | | |
|---|---|---|
| ಸಾಕ್ಷಿಯ ಹೆಸರುಃ | - | ಭೀಮರಾಯ |
| ತಂದೆಯ/ಗಂಡನ ಹೆಸರುಃ | - | ರಾಮಣ್ಣ |
| ವಯಸ್ಸುಃ | -? | **45** ವರ್ಷ |
| ಉದ್ಯೋಗಃ | - | ಒಕ್ಕಲುತನ. |
| ವಾಸಸ್ಥಳಃ | - | ಯರಗೋಳ. |

ಮುಖ್ಯ ವಿಚಾರಣೆಃ ಸ.ಸ.ಅ. ರವರಿಂದಃ

ಮೃತ ಚಂದ್ರಶೇಖರ ನನಗೆ ಗೊತ್ತಿರುವುದಿಲ್ಲ. ಪೊಲೀಸರು ನನ್ನನ್ನು ಕರೆದು ವಿಚಾರಿಸಿರುವುದಿಲ್ಲ. ಸಾಕ್ಷಿಯು ತಾನು ಸಹಿ ಮಾಡಿದ ದಾಖಲೆಯನ್ನು ನೋಡಿ ಗುರುತಿಸಿದ್ದು ಸದರಿ ದಾಖಲೆಯು ಶವ ತನಿಖಾ ವರದಿಯಾಗಿದ್ದು ಅದನ್ನು ನಿಪಿ 2 ಎಂದು ಗುರುತಿಸಲಾಯಿತು. ಅದರ ಮೇಲೆ ಇರುವ ಸಾಕ್ಷಿಯ ಸಹಿಯನ್ನು ನಿಪಿ 2(ಎ) ಎಂದು ಗುರುತಿಸಲಾಯಿತು. ಸಾಕ್ಷಿಯು ತಾನು ಇರುವ ಫೋಟೋವನ್ನುನೋಡಿ ಗುರುತಿಸಿದ್ದು ಅದನ್ನು ನಿಪಿ 3 ಎಂದು ಗುರುತಿಸಲಾಯಿತು. ಯಾವ ಕಾರಣಕ್ಕಾಗಿ ನಿಪಿ 2 ರ ಮೇಲೆ ಸಹಿ ಮಾಡಿರುತ್ತೇನೆ ಎಂದು ನನಗೆ ಗೊತ್ತಿರುವುದಿಲ್ಲ. ನಾನು ನೋಡಲು ಹೋದಾಗ ಫೋಟೋವನ್ನು ತೆಗೆದಿದ್ದರು. ನಿಪಿ 2 ರಲ್ಲಿ ಬರೆದಿರುವ ವಿಷಯ ನನಗೆ ಗೊತ್ತಿರುವುದಿಲ್ಲ.

(ಈ ಹಂತದಲ್ಲಿ ಸಾಕ್ಷಿಯು ಪ್ರತಿಕೂಲಕರ ಸಾಕ್ಷ್ಯವನ್ನು ನುಡಿದ ಕಾರಣ ಸ.ಸ.ಅಭಿಯೋಜಕರವರು ಪಾಟೀ ಸವಾಲು ಮಾಡಲು ಅನುಮತಿ ಕೋರಿರುತ್ತಾರೆ.)

ಪಾಟೀ ಸವಾಲುಃ ಸ.ಸ.ಅ. ರವರಿಂದಃ

ದಿನಾಂಕಃ 30.01.2024 ರಂದು ಚಂದ್ರಶೇಖರ ಇತನು ಮೃತಪಟ್ಟಿದ್ದನ್ನು. ಆತನ ಶವ ಪಂಚನಾಮೆಯ ಸಲುವಾಗಿ ನನ್ನನ್ನು ಆಸ್ಪತ್ರೆಗೆ ಕರೆಸಿದ್ದರು ಎಂದರೆ ಸರಿಯಲ್ಲ. ಬೆಳಗ್ಗೆ 11-30 ರಿಂದ ಮಧ್ಯಾಹ್ನ 12-30 ಗಂಟೆಯ ವರೇಗೆ ನಿಪಿ 2 ರಂತೆ ನನ್ನ ಸಮಕ್ಷಮ ಶವ ಪಂಚನಾಮೆಯನ್ನು

ಮಾಡಿರುತ್ತಾರೆ ಎಂದರೆ ಸರಿಯಲ್ಲ. ನನ್ನ ಹಾಗೂ ಚಾಸಾ-3 ರವರ ಸಮಕ್ಷಮ ಪೊಲೀಸರು ನಿಪಿ 2 ರಂತೆ ಶವ ತನಿಖಾ ವರದಿಯನ್ನು ಮಾಡಿ ನಿಪಿ 3 ರಂತೆ ಪೋಟೋವನ್ನು ತೆಗೆದಿದ್ದರು ಸಹ ನಾನು ಆರೋಪಿತನೊಂದಿಗೆ ರಾಜೀ ಮಾಡಿಕೊಂಡಿರುವ ಕಾರಣ ಅಭಿಯೋಜನೆಗೆ ವಿರುದ್ದವಾಗಿ ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆಂದರೆ ಸರಿಯಲ್ಲ.

ಪಾಟೀ ಸವಾಲುಃ ಆರೋಪಿ ಪರ ವಕೀಲರಾದ ಶ್ರೀ. ವಿ.ವಿ.ಕೆ. ರವರಿಂದಃ

ಆರೋಪಿ ಪರ ವಕೀಲರು ಪಾಟೀ ಸವಾಲು ಇಲ್ಲ ಎಂದು ಹೇಳಿರುತ್ತಾರೆ.

<u>ಮರು ವಿಚಾರಣೆಃ ಇಲ್ಲಃ</u>

( ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚುಗಾರನಿಂದ ಬೆರಳಚ್ಚು ಮಾಡಿಸಲಾಯಿತು)

**ಓ. ಹೇ. ಕೇ. ಸರಿ ಅದೆ.**

ಮುಖ್ಯ ನ್ಯಾಯಿಕ ದಂಡಾಧಿಕಾರಿಗಳು,
ಯಾದಗಿರಿ.